ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 30-03-2021 ಪ್ರಶ್ನೆ ಸಂಖ್ಯೆ : 334(2415)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಸುನೀಲ್ ವಲ್ಯಾಪುರ್(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 30-03-2021

ಉತ್ತರಿಸುವ ಸಚಿವರು: ಪೌರಾಡಳಿತ ಹಾಗೂ ಸಕ್ಕರೆ ಸಚಿವರು

ವಿಷಯ : ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಯೋಜನೆಯಡಿಯಲ್ಲಿ ಬಿಡುಗಡೆಯಾಗಿರುವ ಅನುದಾನದ ಬಗ್ಗೆ

(ಅ) ಕಳೆದ ಮೂರು ವರ್ಷಗಳಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ (ಕೆ.ಕೆ.ಆರ್.ಡಿ.ಬಿ) ಯೋಜನೆ ಅಡಿಯಲ್ಲಿ ಸರ್ಕಾರದಿಂದ ಬಿಡುಗಡೆಯಾದ ಮತ್ತು ಖರ್ಚಾದ ಅನುದಾನ ಎಷ್ಟು;

(ಆ) ಸದರಿ ಯೋಜನೆ ಅಡಿಯಲ್ಲಿ ಸಮುದಾಯ ಭವನ ನಿರ್ಮಾಣ ಕಾಮಗಾರಿಗೆ ಅನುದಾನ ನೀಡಲು ಅವಕಾಶ ಇದೆಯೇ; ಇದ್ದಲ್ಲಿ, ಅನುದಾನ ನೀಡದಿರಲು ಕಾರಣಗಳೇನು;

(ಇ) ಕಳೆದ ಮೂರು ವರ್ಷಗಳಲ್ಲಿ (ಕೆ.ಕೆ.ಆರ್.ಡಿ.ಬಿ) ಯೋಜನೆ ಅಡಿಯಲ್ಲಿ "ಪ್ರಾದೇಶಿಕ ನಿಧಿ" ಯಲ್ಲಿ ಮಂಜೂರಾದ ಅನುದಾನ ಎಷ್ಟು; ಮತ್ತು ಸದರಿ ಅನುದಾನದಲ್ಲಿ ಕೈಗೊಂಡ ಕಾಮಗಾರಿಗಳಾವುವು? (ವಿವರ ನೀಡುವುದು)